# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ಮತ್ತು ಹಾವೇರಿ ಜಿಲ್ಲಾ ಪಂಚಾಯತ್‌ಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಕಾರ್ಮಿಕ ಇಲಾಖೆಗಳ ಅಧಿಕಾರಿ/ಸಿಬ್ಬಂದಿಯವರ ವೇತನ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ ಮತ್ತು ಹಾವೇರಿ ಇವರ ಪತ್ರಗಳು

**ಪ್ರಸ್ತಾವನೆ:**

ಬೆಳಗಾವಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ವ್ಯಾಪ್ತಿಯ ಆಯುಷ್ ಇಲಾಖೆಯ ಮತ್ತು ಹಾವೇರಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾರ್ಮಿಕ ಇಲಾಖೆಯಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ, ಅಧಿಕಾರಿ/ಸಿಬ್ಬಂದಿಯವರ ವೇತನ ವೆಚ್ಚಕ್ಕಾಗಿ ಲೆಕ್ಕ ಶೀರ್ಷಿಕೆ 2210 ಮತ್ತು 2030(ಯೋಜನೇತರ) ಕಾರ್ಯಕ್ರಮದಡಿ ಅನುಕ್ರಮವಾಗಿ ರೂ.2.00ಲಕ್ಷ ಮತ್ತು ರೂ.7.60ಲಕ್ಷ ಒಟ್ಟು ರೂ.9.60ಲಕ್ಷ ಅನುದಾನವನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಲಾಗಿದೆ. ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-196-1-05-300 (ಯೋಜನೇತರ) ಅಡಿ ಲಭ್ಯವಿರುವ ಅನುದಾನದಿಂದ ಬಿಡುಗಡೆಗೊಳಿಸುವಂತೆ ಆದೇಶಿಸಲಾಗಿದೆ. 2015-16ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 2515-00-196-1-05-300 (ಯೋಜನೇತರ)ಅಡಿ ತೆರವಾದ ಹುದ್ದೆಗಳಿಗೆ ಕಾರ್ಯಕ್ರಮದಡಿ ರೂ.7500.00ಲಕ್ಷಗಳ ಅನುದಾನದಲ್ಲಿ ಲಭ್ಯವಿರುವ ಅನುದಾನದಿಂದ ರೂ.9.60ಲಕ್ಷಗಳನ್ನು ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 60 ವೆಚ್ಚ 6/2016 ದಿನಾಂಕ:24ನೇ ಫೆಬ್ರವರಿ 2016

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಕೆಳಕಂಡಂತೆ ಕಾಲಂ 2ರ ಜಿಲ್ಲಾ ಪಂಚಾಯತ್‌ಗೆ ಕಾಲಂ 4ರ ಕಾರ್ಯಕ್ರಮಗಳಡಿ ವೇತನ ವೆಚ್ಚಕ್ಕಾಗಿ ಕಾಲಂ 5ರನ್ವಯ ರೂ.9.60ಲಕ್ಷ (ರೂಪಾಯಿ ಒಂಬತ್ತು ಲಕ್ಷದ ಅರವತ್ತು ಸಾವಿರಗಳು ಮಾತ್ರ)ಗಳನ್ನು ಕಾಲಂ 3 ಲೆಕ್ಕ ಶೀರ್ಷಿಕೆಯಡಿ ಬಿಡುಗಡೆಗೊಳಿಸಲಾಗಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1)ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿದ ನಿರ್ದೇಶನದಂತೆ ಕ್ರಮವಹಿಸಿ ವೇತನ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

| ಕ್ರ. ಸಂ. | ಜಿಲ್ಲಾ ಪಂಚಾಯತ್ | ಬಿಡುಗಡೆಗೊಳಿಸಿದ ಲೆಕ್ಕ ಶೀರ್ಷಿಕೆ | ವೇತನ ವೆಚ್ಚಕ್ಕಾಗಿ ಮರುಹೊಂದಾಣಿಕೆಗೊಳಿಸಬೇಕಾದ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | 2 | 3 | 4 | 5 |
| 1 | ಬೆಳಗಾವಿ | 2515-00-196-1-05-300(NP) | 2210-00-101-0-41-001(ಯೋಜನೇತರ) | 2.00 |
| 2 | ಹಾವೇರಿ | 2515-00-196-1-05-300(NP) | 2230-00-101-0-26-001(ಯೋಜನೇತರ) | 7.60 |
| | | ಒಟ್ಟು | | **9.60** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಕೆ. ಮುರಳೀಧರ 24-2-16

(ಕೆ. ಮುರಳೀಧರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ(ವೆಚ್ಚ 5)

1. ಮಹಾಲೇಖಪಾಲರು (ಎ&ಇ), ಲೆಕ್ಕ ಪರಿಶೋಧನೆ 1&2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆಯುಷ್/ಕಾರ್ಮಿಕ ಇಲಾಖೆ
3. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ/ಹಾವೇರಿ
4. ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
5. ಜಿಲ್ಲಾ ಖಜಾನೆ ಅಧಿಕಾರಿಗಳು, ~~ಮೈಸೂರು/ಚಿಕ್ಕಮಗಳೂರು/ಬೆಂಗಳೂರು(ಗ್ರಾ)~~ ಬೆಳಗಾವಿ/ಹಾವೇರಿ
6. ರಕ್ಷಾ ಕಡತಕ್ಕೆ
7. ಹೆಚ್ಚುವರಿ ಪ್ರತಿ